# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ ನೀಡುತ್ತಿರುವ ಪ್ರೋತ್ಸಾಹ ಧನವನ್ನು ಹೆಚ್ಚಿಸುವ ಬಗ್ಗೆ.

ಓದಲಾಗಿದೆ: 1. ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಎಲ್ 162 ಪಿಹೆಚ್‌ಪಿ 91, ದಿನಾಂಕ: 30.9.1991.

2. ಸರ್ಕಾರಿ ಆದೇಶ ಸಂಖ್ಯೆ: ಸಕಕಾ 223 ಪಿಹೆಚ್‌ಪಿ 92, ದಿನಾಂಕ: 31.12.1992.

3. ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಪತ್ರ ಸಂಖ್ಯೆ: ವಿಹಿನಾಸಇ/ಯೋಜನೆ:ಪ್ರತಿಭಾವಂತ: ಅಂ.ವಿ.ಪ್ರೋಧನ:09:2013-14/4563, ದಿನಾಂಕ: 26.8.2013.

* * * * *

ಪ್ರಸ್ತಾವನೆ:

ಸೆಕಂಡರಿ ಸ್ಕೂಲ್ ಲೀವಿಂಗ್ ಸರ್ಟಿಫಿಕೇಟ್ (ಎಸ್‌ಎಸ್‌ಎಲ್‌ಸಿ), ಪದವಿ ಪೂರ್ವ ಶಿಕ್ಷಣ (ಪಿಯುಸಿ), ಪದವಿ ಮತ್ತು ಸ್ನಾತಕೋತ್ತರ ಪದವಿಗಳಲ್ಲಿ ಶೇ.60 ಕ್ಕಿಂತ ಹೆಚ್ಚು ಅಂಕ ಪಡೆದ ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನವನ್ನು ಮೇಲೆ ಓದಲಾದ ಕ್ರಮಾಂಕ (1) ಮತ್ತು (2) ರಲ್ಲಿನ ಸರ್ಕಾರದ ಆದೇಶಗಳಲ್ಲಿ ನಿಗಧಿಪಡಿಸಿದೆ.

ಸಮಾಜ ಕಲ್ಯಾಣ ಇಲಾಖೆಯು ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನವನ್ನು ಹೆಚ್ಚಿಸಿರುವುದನ್ನು ಗಮನದಲ್ಲಿಟ್ಟುಕೊಂಡು ವಿಕಲಚೇತನ ವಿದ್ಯಾರ್ಥಿಗಳನ್ನು ಪ್ರತಿಭಾವಂತರನ್ನಾಗಿಸಿ ಸಮಾಜದ ಮುಖ್ಯವಾಹಿನಿಗೆ ತರುವ ಉದ್ದೇಶದಿಂದ ಹಾಲಿಯಿರುವ ಪ್ರೋತ್ಸಾಹ ಧನವನ್ನು ತರಗತಿವಾರು ಹೆಚ್ಚಿಸಲು ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರು ಮೇಲಿನ ಕ್ರಮಾಂಕ (3) ರಲ್ಲಿ ಓದಲಾದ ದಿನಾಂಕ: 26.8.2013 ರ ಪತ್ರದಲ್ಲಿ ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸುತ್ತದೆ.

**ಸರ್ಕಾರದ ಆದೇಶ ಸಂಖ್ಯೆ: ಮಮಇ 324 ಪಿಹೆಚ್‌ಪಿ 2013, ಬೆಂಗಳೂರು, ದಿನಾಂಕ: 5.2.2014.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳಿಂದ ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ ನೀಡುತ್ತಿರುವ ಪ್ರೋತ್ಸಾಹ ಧನವನ್ನು ಈ ಮುಂದಿನಂತೆ ಪರಿಷ್ಕರಿಸಿದೆ.

13/2

ಸಂಖ್ಯೆ ........
ದಿನಾಂಕ 13/2/14

. . . .2

| ಕ್ರ ಸಂ. | ತರಗತಿಗಳು | ಹಾಲಿ ಇರುವ ಪ್ರೋತ್ಸಾಹ ಧನ | ಹೆಚ್ಚಿಸಿರುವ ಪ್ರೋತ್ಸಾಹ ಧನ |
|---|---|---|---|
| 1 | ಎಸ್.ಎಸ್.ಎಲ್.ಸಿ. | ರೂ.500/- | ರೂ.3000/- |
| 2 | ಪದವಿ ಪೂರ್ವ ಶಿಕ್ಷಣ | ರೂ.750/- | ರೂ.5000/- |
| 3 | ಪದವಿ, ಟಿ.ಸಿ.ಹೆಚ್. | ರೂ.1000/- | ರೂ.8000/- |
| 4 | ಬಿ.ಇಡಿ, ಸ್ನಾತಕೋತ್ತರ ಪದವಿ, ಎಂ.ಎ., ಎಂ.ಕಾಂ., ಎಂ.ಎಸ್ಸಿ., ಹಾಗೂ ಪದವಿ ನಂತರ 2 ವರ್ಷಗಳ ಕೋರ್ಸ್‌ಗೆ | ರೂ.1200/- | ರೂ.10000/- |
| 5 | ಕೃಷಿ ಪದವಿ, ಇಂಜಿನೀಯರಿಂಗ್ ತಾಂತ್ರಿಕ ಪಶುವೈದ್ಯಕೀಯ, ಎಂ.ಇಡಿ | ರೂ.1500/- | ರೂ.12000/- |

ಈ ವೆಚ್ಚವನ್ನು ಲೆಕ್ಕಶೀರ್ಷಿಕೆ "2235-02-101-0-05" ಯೋಜನೇತರ ಅಡಿಯಲ್ಲಿ ಲಭ್ಯವಿರುವ ಮೊತ್ತದಲ್ಲಿಯೇ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 729 ವೆಚ್ಚ-3/2013, ದಿನಾಂಕ: 29.11.2013 ರಲ್ಲಿ ನೀಡಿರುವ ಸಹಮತಿನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಬಿ.ಕಮಲಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ-2,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ.

ಪ್ರತಿಗಳು:

1) ಮಹಾಲೇಖಪಾಲರು, (ಎ ಮತ್ತು ಇ) ಕರ್ನಾಟಕ, ಬೆಂಗಳೂರು.
2) ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ.
3) ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
4) ಜಂಟಿ ನಿರ್ದೇಶಕರು/ಉಪನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5) ಉಪನಿರ್ದೇಶಕರು, ಎನ್.ಎಂ.ಸಿ. ಖನಿಜ ಭವನ ಬೆಂಗಳೂರು
6) ಆಂತರಿಕ ಆರ್ಥಿಕ ಸಲಹೆಗಾರರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
7) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ – 3 &4).
8) ಎಲ್ಲಾ ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿಗಳು, (ನಿರ್ದೇಶಕರು, ವಿ.ಹಿ.ನಾ.ಸ ಇಲಾಖೆ ರವರ ಮುಖಾಂತರ)
9) ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.